**Bangalore**
**Regional News**
**28.01.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ-ಆಡಳಿತ, ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿ
2. ರಾಜ್ಯದಲ್ಲಿ ಮಳೆಯಾಧಾರಿತ ಕೃಷಿ ಭೂಮಿಯಲ್ಲಿ ೭೭ ಸಾವಿರದ ೬೪೬ ಹೆಕ್ಟೇರ್ ಭೂಮಿ ಸವಳು-ಜವಳು - ಕೃಷಿ ಸಚಿವ ಚಲುವರಾಯಸ್ವಾಮಿ ಸ್ಪಷ್ಟನೆ
3. ಅಬಕಾರಿ ಸಚಿವರ ರಾಜೀನಾಮೆಗೆ ಆಗ್ರಹಿಸಿ ಮೇಲ್ಮನೆಯಲ್ಲಿ ಪ್ರತಿಪಕ್ಷಗಳ ಸದಸ್ಯರಿಂದ ಧರಣಿ
4. ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್‌ಪವಾರ್ ನಿಧನಕ್ಕೆ ವಿಧಾನಸಭೆಯಲ್ಲಿ ಸಂತಾಪ
5. ಮಡಿಕೇರಿಯಲ್ಲಿ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅವರ ೧೨೭ನೇ ಜಯಂತಿ ಆಚರಣೆ

<><><><>

ವಿಧಾನಸಭೆಯಲ್ಲಿಂದು ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿಣರ್ಯದ ಮೇಲಿನ ಚರ್ಚೆಯಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು, ಗದ್ದಲ ಏರ್ಪಟ್ಟಿತ್ತು. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತಿಗೆ ಆಕ್ಷೇಪ ವ್ಯಕ್ತಪಡಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ, ರಾಜ್ಯಪಾಲರಿಗೆ ನಾವು ಅವಮಾನ ಮಾಡಿಲ್ಲ, ಮಾಡುವುದೂ ಇಲ್ಲ ಎಂದು ಹೇಳಿದರು. ಕಾನೂನು ಮತ್ತು ಸಂಸದೀಯ ಸಚಿವ ಎಚ್.ಕೆ.ಪಾಟೀಲ್ ಮಧ್ಯ ಪ್ರವೇಶಿಸಿ ಮಾತನಾಡಿ, ರಾಜ್ಯಪಾಲರಿಗೆ ವಂದನಾ ನಿರ್ಣಯವಲ್ಲ, ರಾಜ್ಯಪಾಲರ ಭಾಷಣಕ್ಕೆ ವಂದನಾ ನಿರ್ಣಯ ಎಂದು ಸಮರ್ಥಿಸಿಕೊಂಡರು. ಬಳಿಕ, ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡುವ ಸಂದರ್ಭದಲ್ಲಿ ಅವರ ಭಾಷಣಕ್ಕೆ ಆಡಳಿತ ಪಕ್ಷದ ಸದಸ್ಯರು ಪದೇ ಪದೇ ಅಡ್ಡಿಪಡಿಸಿದರು. ಇದರಿಂದಾಗಿ ಸದನದಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು.

<><><><>

ರಾಜ್ಯದಲ್ಲಿ ಮಳೆಯಾಧಾರಿತ ಕೃಷಿ ಭೂಮಿಯಲ್ಲಿ ೭೭ ಸಾವಿರದ ೬೪೬ ಹೆಕ್ಟೇರ್ ಭೂಮಿ ಸವಳು-ಜವಳು ಬಾಧಿತವಾಗಿರುತ್ತದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಭರಮಗೌಡ ಆಲಗೌಡ ಕಾಗೆ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಎನ್.ಚಲುವರಾಯಸ್ವಾಮಿ, ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿತ ಕೇಂದ್ರದಲ್ಲಿರುವ

ದತ್ತಾಂಶದನ್ವಯ ಉತ್ತರ ಕರ್ನಾಟಕದ ಒಟ್ಟು ೧೩ ಜಿಲ್ಲೆಗಳಲ್ಲಿ ೫೬ ಸಾವಿರದ ೬೨೧ ಹೆಕ್ಟೇರ್ ಸವಳು-ಜವಳು ಬಾಧಿತ ಪ್ರದೇಶವಾಗಿದೆ ಎಂದು ಹೇಳಿದ್ದಾರೆ. ೨೦೧೬-೧೭ ರಿಂದ ೨೦೨೫-೨೬ರ ಅವಧಿಯಲ್ಲಿ ೩೧ ಕೋಟಿ ೪೩ ಲಕ್ಷ ರೂಪಾಯಿ ವೆಚ್ಚದಲ್ಲಿ ೪ ಸಾವಿರದ ೨೦೮ ಹೆಕ್ಟೇರ್ ಪ್ರದೇಶದಲ್ಲಿ ಅಂತರ ಬಸಿಕಾಲುವೆ ನಿರ್ಮಾಣ ಮೂಲಕ ಮಣ್ಣಿನ ಸುಧಾರಣೆ ಉಪಚಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದಾರೆ.

<><><><>

ಗ್ರಾಮ ಪಂಚಾಯತ್ ಗಳಲ್ಲಿ ಇ-ಸ್ವತ್ತು ಖಾತಾ ವಿತರಣೆಗೆ ಸಂಬಂಧಿಸಿದಂತೆ ತಂತ್ರಾಂಶದಲ್ಲಿ ಉಂಟಾದ ದೋಷಗಳನ್ನು ೧೫ ರಿಂದ ೨೫ ದಿನಗಳಲ್ಲಿ ಸರಿಪಡಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಇ-ಸ್ವತ್ತು ಖಾತಾ ವಿತರಣಾ ವ್ಯಾಪ್ತಿಯಲ್ಲಿ ಒಂದುಕೋಟಿ ಹೊಸ ಆಸ್ತಿ ತರಲು ಸರ್ಕಾರ ನಿರ್ಧರಿಸಿದ್ದು ಆ ಸಂಬಂಧ ತಂತ್ರಾಂಶದಲ್ಲಿರುವ ತಾಂತ್ರಿಕ ದೋಷಗಳನ್ನು ಶೀಘ್ರವೇ ನಿವಾರಿಸಲಾಗುವುದು ಎಂದು ಹೇಳಿದ್ದಾರೆ. ಇ-ಸ್ವತ್ತು ಖಾತೆಗಾಗಿ ೪೪ ಸಾವಿರದ ೫೦೮ ಅರ್ಜಿ ಸಲ್ಲಿಕೆಯಾಗಿದ್ದು ೭ ಸಾವಿರದ ೯೭೮ ಅರ್ಜಿಗಳನ್ನು ಅನುಮೋದಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ದೌರ್ಜನ್ಯ, ಲೈಂಗಿಕ ದೌರ್ಜನ್ಯ ತಡೆಯಲು ಕಟ್ಟುನಿಟ್ಟಿನ ಕ್ರಮಕೈಗೊಳ್ಳಲಾಗಿದ್ದು ಇದಕ್ಕೆ ಪೂರಕವಾಗಿ ಅಕ್ಕ ಪಡೆ ಸ್ಥಾಪಿಸಲಾಗಿದೆ ಎಂದು ಮಹಿಳಾ ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿಂದು ಬಿಜೆಪಿ ಸದಸ್ಯ ಭರತ್ ಶೆಟ್ಟಿಯವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸಂತ್ರಸ್ತರು, ದೂರವಾಣಿ ಸಂಖ್ಯೆ ೧೦೯೮ ಹಾಗೂ ೧೧೨ಕ್ಕೆ ಕರೆ ಮಾಡಿ ಸಹಾಯ ಪಡೆಯಬಹುದು ಎಂದು ಹೇಳಿದ್ದಾರೆ. ಮಹಿಳೆಯರು, ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಅಪಹರಣ ತಡೆಗಟ್ಟಲು ಶಾಲೆ, ಕಾಲೇಜು ಕ್ಯಾಂಪಸ್ ಹಾಗೂ ಸಾರ್ವಜನಿಕ ಪ್ರದೇಶದಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಿರಂತರವಾಗಿ ನಡೆಸಲಾಗುತ್ತದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

<><><><>

ವಿಧಾನಸಭೆ ಇಂದು ಕೆಲಹೊತ್ತಿನ ಕಾಲ ತುಳುಮಯವಾಗಿತ್ತು. ತುಳು ಭಾಷೆಯನ್ನು ರಾಜ್ಯದ ಎರಡನೇ ಹೆಚ್ಚುವರಿ ಅಧಿಕೃತ ಭಾಷೆಯನ್ನಾಗಿ ಘೋಷಣೆ ಮಾಡುವ ಪ್ರಸ್ತಾವನೆ ಬಗ್ಗೆ ಪ್ರಶ್ನೋತ್ತರ ಕಲಾಪದಲ್ಲಿ ಪ್ರಶ್ನೆ ಕೇಳಿದಾಗ ದಕ್ಷಿಣ ಕನ್ನಡ ಶಾಸಕರು ಸಭಾಧ್ಯಕ್ಷರ ಜೊತೆಗೆ ತುಳು ಭಾಷೆಯಲ್ಲಿ ಪ್ರಶ್ನೆ ಹಾಗೂ ಉಪ ಪ್ರಶ್ನೆ ಕೇಳಿದ್ದು ಹಾಗೂ ಸಭಾಧ್ಯಕ್ಷ ಯು.ಟಿ.ಖಾದರ್ ತುಳು ಭಾಷೆಯಲ್ಲಿ ಉತ್ತರ ನೀಡಿದ್ದರಿಂದ ಸದನ ಕೆಲಹೊತ್ತು ನಗೆಗಡಲಲ್ಲಿ ತೇಲಿತ್ತು. ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿ

ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಸಭಾಧ್ಯಕ್ಷರೇ ನನ್ನ ರಕ್ಷಣೆಗೆ ಬರಬೇಕು. ನನಗೆ ತುಳು ಅರ್ಥವಾಗಲ್ಲ ಅವರು ಬೈದರೂ ಗೊತ್ತಾಗಲ್ಲ ಎಂದರು. ಆಗ ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ ತುಳು ಭಾಷೆಯಲ್ಲಿ ಬೈಯ್ದರು ಪ್ರೀತಿಯಿಂದಲೆ ಬೈಯತ್ತಾರೆ ಎಂದು ಸಮರ್ಥಿಸಿಕೊಂಡರು. ಅಶೋಕ್ ಕುಮಾರ್ ರೈ ಪ್ರಶ್ನೆಗೆ ಉತ್ತರಿಸಿದ ಸಚಿವ ಶಿವರಾಜ್ ತಂಗಡಗಿ, ಡಾ ಮೋಹನ್ ಆಳ್ವ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯು ತುಳು ಭಾಷೆಯ ಸ್ವರೂಪ ಮತ್ತು ತುಳು ಭಾಷೆಯ ಇತಿಹಾಸ, ತುಳು ಸಾಹಿತ್ಯ, ಆಧುನಿಕ ತುಳು ಸಾಹಿತ್ಯ, ಸಂಸ್ಕೃತಿ, ಶಾಸನಗಳ ಕುರಿತು ಅಧ್ಯಯನ ನಡೆಸಿ ೨೦೨೩ ಫೆಬ್ರವರಿ ೧೪ ರಂದು ವರದಿ ಸಲ್ಲಿಸಿದೆ ಎಂದು ತಿಳಿಸಿದ್ದಾರೆ.

<><><><>

ವಿಧಾನ ಪರಿಷತ್ತಿನ ನೂರ ಐವತ್ತೆಂಟನೆಯ ಅಧಿವೇಶನದ ನಾಲ್ಕನೇ ದಿನವಾದ ಇಂದು ರಾಜ್ಯಪಾಲರ ಭಾಷಣ ಕುರಿತ ವಂದನಾ ನಿರ್ಣಯ ವಿರೋಧಿಸಿ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಸದನದ ಬಾವಿಗಿಳಿದು ಧರಣಿ ನಡೆಸಿದರು. ರಾಜ್ಯಪಾಲರ ಭಾಷಣ ಸಂಬಂಧ ವಂದನಾ ನಿರ್ಣಯವೋ ಖಂಡನಾ ನಿರ್ಣಯವೋ ಎಂಬುದರ ಬಗ್ಗೆ ರಾಜ್ಯ ಸರ್ಕಾರ ದ್ವಂದ್ವ ನಿಲುವು ತಳೆದಿದೆ. ಗೊಂದಲವನ್ನ ನಿವಾರಿಸಿದ ಬಳಿಕವಷ್ಟೇ ಚರ್ಚೆ ನಡೆಸಬೇಕು ಎಂದು ವಿಪಕ್ಷಗಳ ಸದಸ್ಯರು ಪ್ರತಿಭಟಿಸಿದರು. ಸದನದ ಬಾವಿಗಿಳಿದು ಧರಣಿ ಆರಂಭಿಸುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಬಾವಿಯಲ್ಲಿ ನಿಂತು ಧಿಕ್ಕಾರ ಕೂಗಬೇಡಿ. ಹಾಗೆ ಮಾಡಿದರೆ ಸದನದಿಂದ ಹೊರ ಹಾಕುತ್ತೇನೆ ಎಂದು ಎಚ್ಚರಿಕೆ ನೀಡಿದರು. ಇದಕ್ಕೆ ಪ್ರತಿಕಿಯಿಸಿದ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನಮ್ಮನ್ನ ಹೊರ ಹಾಕುವುದಾದರೆ ಹಾಕಿ. ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರವೆಸಗಿದ ಸಚಿವ ಆರ್.ಬಿ.ತಿಮ್ಮಾಪುರ್ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು. ಈ ವೇಳೆ ಮಾತನಾಡಿದ ಸಭಾಪತಿ ರಾಷ್ಟ್ರಪತಿ ಹಾಗೂ ರಾಜ್ಯಪಾಲರನ್ನ ಟೀಕೆಗೆ ಒಳಪಡಿಸುವಂತಿಲ್ಲ. ಇದು ಎರಡೂ ಪಕ್ಷದ ಸದಸ್ಯರಿಗೆ ಅನ್ವಯಿಸಲಿದೆ. ನಿಯಮ ಮೀರಿದರೆ ಶಿಸ್ತು ಕ್ರಮ ಜರುಗಿಸಬೇಕಾಗುತ್ತದೆ ಎಂದು ಮತ್ತೊಮ್ಮೆ ಎಚ್ಚರಿಸಿದರು. ಸದನ ನಿಯಂತ್ರಣಕ್ಕೆ ಬಾರದ ಹಿನ್ನೆಲೆಯಲ್ಲಿ ಸಭಾಪತಿ ಸದನವನ್ನು ೧೦ ನಿಮಿಷಗಳ ಕಾಲ ಮುಂದೂಡಿದರು.

<><><><>

ವಿಮಾನ ಅಪಘಾತದಲ್ಲಿ ನಿಧನರಾದ ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ಅಜಿತ್ ಪವಾರ್ ಹಾಗೂ ಇತರ ಐದು ಮಂದಿ ನಿಧನಕ್ಕೆ ವಿಧಾನಸಭೆಯಲ್ಲಿ ಇಂದು ಸಂತಾಪ ಸೂಚಿಸಲಾಯಿತು. ಕಲಾಪ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ಯು.ಟಿ.ಖಾದರ್, ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ಅಜಿತ್ ಪವಾರ್ ಹಾಗೂ ಅವರ ಜೊತೆಯಲ್ಲಿರುವ ಐದು ಮಂದಿಯ ನಿಧನಕ್ಕೆ ಸಂತಾಪ ಸೂಚಿವ ನಿರ್ಣಯ ಮಂಡಿಸಿದರು. ಸಂತಾಪ ನಿರ್ಣಯದ ಮೇಲೆ ಮಾತನಾಡಿದ ಕಾನೂನು ಮತ್ತು ಸಂಸದೀಯ ಸಚಿವ

ಎಚ್.ಕೆ.ಪಾಟೀಲ್, ಅಜಿತ್ ಪವಾರ್ ಮಹಾರಾಷ್ಟ್ರದ ಒಬ್ಬ ಜನಪ್ರಿಯ ರಾಜಕಾರಣಿಯಾಗಿದ್ದರು. ಒಂದು ನಿರ್ಣಯ ತಗೆದುಕೊಂಡರೆ ಯಾವುದೇ ಕಾರಣಕ್ಕೂ ಅದನ್ನು ವಾಪಾಸ್ ತಗೆದುಕೊಳ್ಳುತ್ತಿರಲಿಲ್ಲ. ಅವರು ಖಡಕ್ ರಾಜಕಾರಣಿಯಾಗಿದ್ದರು. ಅವರು ಕನ್ನಡಿಗರು ಮತ್ತು ಕರ್ನಾಟಕದ ಬಗ್ಗೆ ಸುಮಧುರ ಭಾವನೆ ಹೊಂದಿದ್ದರು. ಸತತ ಆರು ಬಾರಿ ಉಪ ಮುಖ್ಯಮಂತ್ರಿಯಾಗಿ ಸಾರ್ವಜನಿಕ ಕ್ಷೇತ್ರದಲ್ಲಿ ಅವರು ಸಲ್ಲಿಸಿದ ಸೇವೆಯನ್ನು ಕೊಂಡಾಡಿದರು. ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಅಜಿತ್ ಪವಾರ್ ಅವರು ಜನಸಾಮಾನ್ಯರಿಗೆ ದಾದಾ ಎಂದೆ ಜನಪ್ರಿಯರಾಗಿದ್ದರು. ಅವರು ಹಣಕಾಸು ಸಚಿವರಾಗಿ ಜನಪರ ಬಜೆಟ್ ಮಂಡಿಸಿದ್ದರು ಎಂದು ಅವರ ನಿಧನಕ್ಕೆ ಸಂತಾಪ ಸೂಚಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾತನಾಡಿ, ಅಜಿತ್ ಪವಾರ್ ಅವರಿಗೆ ನನ್ನ ವಿಧಾನಸಭಾ ಕ್ಷೇತ್ರದಲ್ಲೂ ದೊಡ್ಡ ಪ್ರಮಾಣದ ಅಭಿಮಾನಿಗಳಿದ್ದಾರೆ. ಅವರು ಮಹಾರಾಷ್ಟ್ರ ಸಹಿತ ತಮ್ಮ ಬಾರಾಮತಿ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಅವರ ಅಕಾಲಿಕ ನಿಧನಕ್ಕೆ ಸಂತಾಪ ಸೂಚಿಸಿದರು.

<><><><>

ಭಾರತೀಯ ಸೇನಾ ಪಡೆಗಳ ಪ್ರಥಮ ಮಹಾದಂಡನಾಯಕ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅವರ ೧೨೭ನೇ ಜನ್ಮಜಯಂತಿಯನ್ನು ಮಡಿಕೇರಿಯಲ್ಲಿಂದು ಸಂಭ್ರಮದಿಂದ ಆಚರಿಸಲಾಯಿತು. ರೋಶನಾರ ಬಳಿಯಲ್ಲಿರುವ ಕಾರ್ಯಪ್ಪ ಅವರ ಸಮಾಧಿ ಸ್ಥಳಕ್ಕೆ ಗಣ್ಯರು ಪುಷ್ಪನಮನ ಸಲ್ಲಿಸಿದರು. ಕೊಡಗು ವಿದ್ಯಾಲಯದ ವಿದ್ಯಾರ್ಥಿಗಳಿಂದ ಫೀಲ್ಡ್ ಮಾಲ್ ಕಾರ್ಯಪ್ಪ ಅವರಿಗೆ ಪ್ರಿಯವಾಗಿದ್ದ ಭಜನೆ, ದೇಶಭಕ್ತಿಗೀತ ಗಾಯನ ಜರುಗಿತು. ಈ ಸಂದರ್ಭದಲ್ಲಿ ಮಾತನಾಡಿದ ಕಾರ್ಯಪ್ಪ ಅವರ ಪುತ್ರ ನಿವೃತ್ತ ಏರ್ ಮಾರ್ಷಲ್ ನಂದಾಕಾರ್ಯಪ್ಪ, ಪ್ರತಿಯೋರ್ವ ಭಾರತೀಯನಿಗೂ ದೇಶ ಮೊದಲಾಗಬೇಕು. ಭಾರತೀಯತೆ ಆದ್ಯತೆಯಾಗಿರಬೇಕು. ವೃತ್ತಿಯ ಆಯ್ಕೆ ಸಂದರ್ಭದಲ್ಲಿ ಭಾರತೀಯ ಸೇನಾ ಪಡೆಗೆ ಸೇರುವ ಕುರಿತು ಆದ್ಯತೆ ಮೇಲೆ ಗಮನ ನೀಡಬೇಕು ಎಂದು ಕರೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>